## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಜ್ಯದಲ್ಲಿ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಯನ್ನು ಡಿಸೆಂಬರ್ 2021ರ ವರೆವಿಗೆ ವಿಸ್ತರಿಸಲು ಮತ್ತು video conference / virtual meeting ಮೂಲಕ ನಡೆಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:-** ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ:ಆರ್‌ಸಿಎಸ್/ಎಕ್ಸ್ ಎಮ್‌ಸಿ/31/2021-22, ದಿನಾಂಕ:23.07.2021.

*****

**ಪ್ರಸ್ತಾವನೆ:**

ಕೋವಿಡ್-19 ಸಾಂಕ್ರಾಮಿಕ ರೋಗವು ಹರಡುತ್ತಿರುವ ಕಾರಣ 2021-22 ನೇ ಸಾಲಿನ ಸಹಕಾರ ಸಂಘಗಳ ವಾರ್ಷಿಕ ಸಾಮಾನ್ಯ ಸಭೆಗಳನ್ನು ಕಳೆದ ಸಾಲಿನಂತೆ ಡಿಸೆಂಬರ್ 2021ರವರೆಗೆ ವಿಸ್ತರಿಸಿ ಮತ್ತು Video Conference / Virtual Meeting ಮೂಲಕ ನಡೆಸಲು ಅನುಮತಿ ನೀಡುವಂತೆ ರಾಜ್ಯದ ವಿವಿಧ ಸಹಕಾರ ಸಂಸ್ಥೆಗಳು ಮತ್ತು ಸದಸ್ಯರು ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ನಿಬಂಧಕರ ಪ್ರಸ್ತಾವನೆಯಲ್ಲಿ ಕೋವಿಡ್-19 ನಿಯಮಾವಳಿಗಳನ್ನು ಅನುಸರಿಸಿ, ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸಲು ಎಲ್ಲಿ ಅವಕಾಶವಿರುವುದೋ ಅಂತಹ ಸಹಕಾರ ಸಂಘಗಳು ಭೌತಿಕ ಹಾಜರಾತಿಯೊಂದಿಗೆ ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸಲು, ಒಂದು ವೇಳೆ ಆ ರೀತಿ ಸಾಧ್ಯವಾಗದಿದ್ದ ಪಕ್ಷದಲ್ಲಿ ಅಂತಹ ಸಹಕಾರ ಸಂಸ್ಥೆಗಳು Video Conference/ Virtual Meeting ವಿಧಾನವನ್ನು ಅನುಸರಿಸಿ ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸಲು ಅನುಮತಿ ನೀಡಬಹುದೆಂದು ನಿಬಂಧಕರು ತಿಳಿಸಿರುತ್ತಾರೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯ ಕಾರಣದಿಂದ ಹಾಗೂ 3ನೇ ಅಲೆ ವ್ಯಾಪಿಸುವ ಸಾಧ್ಯತೆ ಇರುವ ಬಗ್ಗೆ ತಜ್ಞರು ಅಭಿಪ್ರಾಯಪಟ್ಟಿರುವ ಹಿನ್ನಲೆಯಲ್ಲಿ, 2020-21ನೇ ಸಾಲಿನಲ್ಲಿ ಅನುಮತಿ ನೀಡಿರುವಂತೆ, ಪ್ರಸಕ್ತ ಸಾಲಿನಲ್ಲಿಯೂ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಗಳನ್ನು ನಡೆಸುವ ಅವಧಿಯನ್ನು 25 ಸೆಪ್ಟೆಂಬರ್ ರಿಂದ 25 ಡಿಸೆಂಬರ್ 2021ವರವಿಗೆ ವಿಸ್ತರಿಸಲು ಹಾಗೂ ಈ ಸಭೆಗಳನ್ನು Video Conference/ Virtual Meeting ಮೂಲಕವೂ ನಡೆಸಲು ಅನುಮತಿ ನೀಡುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 60 ಸಿಎಲ್‌ಎಮ್ 2021 (ಇ) ಬೆಂಗಳೂರು, ದಿನಾಂಕ: 04.08.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರಡಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 70ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ

ಕ್ರಮವಾಗಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 27(1)ರಲ್ಲಿ ಸಹಕಾರ ಸಂಘಗಳ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 27(ಹೆಚ್-3), 30(1) ಹಾಗೂ 60(1)ಗಳಲ್ಲಿ ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಯನ್ನು ಸೆಪ್ಟೆಂಬರ್ ತಿಂಗಳ ಇಪ್ಪತ್ತೈದನೇ ದಿನದೊಳಗೆ ನಡೆಸತಕ್ಕದ್ದು ಎಂಬ ಅವಕಾಶವನ್ನು ಸಡಿಲಿಸಿ, ಡಿಸೆಂಬರ್ ತಿಂಗಳ ಇಪ್ಪತ್ತೈದನೇ ದಿನದೊಳಗೆ ನಡೆಸಲು ಹಾಗೂ ಕೋವಿಡ್-19 ನಿಯಮಾವಳಿಗಳನ್ನು ಅನುಸರಿಸಿ, ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸಲು ಎಲ್ಲಿ ಅವಕಾಶವಿರುವುದೋ ಅಂತಹ ಸಹಕಾರ ಸಂಸ್ಥೆಗಳು ಭೌತಿಕ ಹಾಜರಾತಿಯೊಂದಿಗೆ ಮತ್ತು ಒಂದು ವೇಳೆ ಆ ರೀತಿ ಅವಕಾಶವಿಲ್ಲದಿದ್ದ ಪಕ್ಷದಲ್ಲಿ ಅಂತಹ ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳು Video Conference/ Virtual Meeting ವಿಧಾನವನ್ನು ಅನುಸರಿಸಿ 2021-22ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯನ್ನುಈ ಕೆಳಕಂಡ ನಿಬಂಧನೆಗೊಳಪಟ್ಟು ನಡೆಸಲು ಅನುಮತಿ ನೀಡಿ ಆದೇಶಿಸಿದೆ.

- ಸರ್ವ ಸದಸ್ಯರ ಸಭೆಯನ್ನು video conference / virtual meeting ಮೂಲಕವೂ ನಡೆಸಬಹುದು.
- ಸರ್ವ ಸದಸ್ಯರ ಸಭೆ ನಡೆಯುವ ದಿನಾಂಕ ಮತ್ತು ವೇಳೆಯನ್ನು ದಿನಪತ್ರಿಕೆಯಲ್ಲಿ ಪ್ರಕಟಿಸುವುದು.
- ಸಭೆಯ ನೋಟೀಸು ಹಾಗೂ ಇನ್ನಿತರೆ ದಾಖಲಾತಿಗಳನ್ನು ಸಂಘದ ವೆಬ್‌ಸೈಟ್ ಮೂಲಕ ಪ್ರಚುರಗೊಳಿಸುವುದು ಹಾಗೂ ಹಾಲಿ ಅನುಸರಿಸುತ್ತಿರುವ ಪದ್ಧತಿಯಂತೆ ನೋಟೀಸುಗಳನ್ನು ಅಂಚೆಯ ಮೂಲಕ ರವಾನಿಸಲು ಸಹ ಕ್ರಮವಿಡತಕ್ಕದ್ದು.
- ಸದಸ್ಯರಿಗೆ ಡಿವಿಡೆಂಡ್‌ಗಳನ್ನು ಇಸಿಎಸ್ ಮೂಲಕ ಅವರುಗಳ ಖಾತೆಗೆ ಪಾವತಿಸಲು ಕ್ರಮವಿಡುವುದು.
- ಇಂಥಹ ಸಭೆಯ ನಡವಳಿಗಳನ್ನು ಅಧಿಕೃತವಾಗಿ ರೆಕಾರ್ಡ್ ಮಾಡಿ ದಾಖಲಿಸುವ ತಂತ್ರಜ್ಞಾನ ಅಳವಡಿಸಿಕೊಳ್ಳತಕ್ಕದ್ದು.
- ಸರ್ವ ಸದಸ್ಯರ ಸಭೆ ನಡೆಸುವ ಸ್ಥಳದಲ್ಲಿ ಕೋವಿಡ್-19ರ ನಿಯಮಾವಳಿಗಳಿಗೆ ಒಳಪಟ್ಟು ಹಾಜರಾತಿಯನ್ನು ನಿರ್ವಹಿಸಿ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಅಧಿನಿಯಮಗಳನ್ವಯ ನಮೂದಿಸಿರುವ ಅಂಶಗಳನ್ನು ಕಾರ್ಯಸೂಚಿಯಲ್ಲಿ ಅಳವಡಿಸಿಕೊಂಡು ಹಾಲಿ ಪದ್ಧತಿಯಂತೆ ನಡವಳಿಗಳನ್ನು ನಡೆಸಲು ಕ್ರಮವಹಿಸತಕ್ಕದ್ದು.
- ಸರ್ವ ಸದಸ್ಯರ ಸಭೆ ನಡೆಸಲು ಕಾಲಕಾಲಕ್ಕೆ ಸರ್ಕಾರವು ಹೊರಡಿಸುವ ಕೋವಿಡ್ ಮಾರ್ಗಸೂಚಿಗಳನ್ನು ಮತ್ತು ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ವೆಂಕಟಸ್ವಾಮಿ) 4/8
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ**

ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.

2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
4. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು
5. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
6. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು ಬೆಂಗಳೂರು/ ಮೈಸೂರು/ ಕಲಬುರ್ಗಿ/ಬೆಳಗಾವಿ ಪ್ರಾಂತ .
8. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ)
9. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿರ್ದೇಶಕರುಗಳಿಗೆ (ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಮೂಲಕ).
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು.
12. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಾಲು ಉತ್ಪಾದಕರ ಮಹಾಮಂಡಳ ನಿ., (ಕೆಎಂಎಫ್), ಬೆಂಗಳೂರು.
13. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಜೋಡಿ ರಸ್ತೆ, ಬೆಂಗಳೂರು-27.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ||ರಾಜಕುಮಾರ್ ರಸ್ತೆ, 1ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು-10.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ ಬೆಂಗಳೂರು.
16. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.